ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯ ವಿಧಾನ ಸಭಾ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE 21/12/19

# ಕುಲ್‌ದೀಪ್ ಸೆಂಗ್ವಾರ್‌ಗೆ ಜೀವಾವಧಿ ಶಿಕ್ಷೆ



**ದೆಹಲಿ:** ಉನ್ನಾವ್ ಅಪಹರಣ ಹಾಗೂ ಅತ್ಯಾಚಾರ ಪ್ರಕರಣ ಸಂಬಂಧ ಅಪರಾಧಿ ಹಾಗೂ ಬಿಜೆಪಿ ಉಚ್ಚಾಟಿತ ಶಾಸಕ ಕುಲ್‌ದೀಪ್ ಸಿಂಗ್ ಸೆಂಗಾರ್ ಅವರಿಗೆ ದೆಹಲಿ ಜಿಲ್ಲಾ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ. ಶುಕ್ರವಾರ ಅಂತಿಮ ತೀರ್ಪು ಓದಿದ ಜಿಲ್ಲಾ ನ್ಯಾಯಾಧೀಶ ಧರ್ಮೇಶ್ ಶರ್ಮಾ, ಅಪರಾಧಿ ಕುಲ್‌ದೀಪ್ ಸಿಂಗ್ ಅವರಿಗೆ ಜೀವಾವಧಿ ಶಿಕ್ಷೆ ಜತೆಗೆ 25 ಲಕ್ಷ ರು. ದಂಡ ವಿಧಿಸಿದ್ದಾರೆ. ಉನ್ನಾವ್ ಅತ್ಯಾಚಾರ ಪ್ರಕರಣದಲ್ಲಿ ಸೆಂಗಾರ್ ತಪ್ಪಿತಸ್ಥ ಎಂದು ಕಳೆದ ಸೋಮವಾರ ದೆಹಲಿ ಕೋರ್ಟ್ ತೀರ್ಪು ನೀಡಿತ್ತು. ಡಿಸೆಂಬರ್ 19ರಂದು ಶಿಕ್ಷೆ ಪ್ರಮಾಣ ಪ್ರಕಟಿಸಲಾಗುವುದು ಎಂದು ತಿಳಿಸಿತ್ತು. ಪ್ರಕರಣದ ಶಿಕ್ಷೆಯನ್ನು ಶುಕ್ರವಾರ ಪ್ರಕಟಿಸಲಾಯಿತು.